ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 217 ಸೇಲೋಯು 2016

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 24.08.2016.

**ಸು ತ್ತೋ ಲೆ**

ವಿಷಯ: ಭ್ರಷ್ಟಾಚಾರ ನಿಗ್ರಹ ದಳಕ್ಕೆ ತನಿಖೆಗಾಗಿ ಪ್ರಕರಣಗಳನ್ನು ವಹಿಸುವ ಸಂದರ್ಭದಲ್ಲಿ ಸರ್ಕಾರದ ಇಲಾಖೆಗಳು ಅನುಸರಿಸಬೇಕಾದ ಕ್ರಮಗಳ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಸೇಲೋಯು 2016, ದಿ:14.03.2016.

*****

ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಸೇಲೋಯು 2016, ದಿ:14.03.2016ರನ್ವಯ ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಪ್ರಕರಣಗಳನ್ನು ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಲಾಗಿದೆ.

2. ಸರ್ಕಾರದ ಕೆಲವು ಇಲಾಖೆಗಳು ತಮ್ಮ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ/ಅಧಿಕಾರಿಗಳ ವಿರುದ್ಧದ ಪ್ರಕರಣಗಳನ್ನು ತಮ್ಮ ಹಂತದಲ್ಲಿ ಯಾವುದೇ ಆಂತರಿಕ ಪರಿಶೀಲನೆ ಮಾಡದೇ ಹಾಗೂ ಸಕ್ಷಮ ಪ್ರಾಧಿಕಾರಗಳ ಅನುಮೋದನೆ ಪಡೆಯದೇ ನೇರವಾಗಿ ಭ್ರಷ್ಟಾಚಾರ ನಿಗ್ರಹ ದಳಕ್ಕೆ ತನಿಖೆಗಾಗಿ ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

3. ಆದುದರಿಂದ, ಇನ್ನು ಮುಂದೆ, ಸರ್ಕಾರದ ಇಲಾಖೆಗಳು ತಮ್ಮ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ/ಅಧಿಕಾರಿಗಳ ವಿರುದ್ಧದ ಪ್ರಕರಣಗಳನ್ನು ಭ್ರಷ್ಟಾಚಾರ ನಿಗ್ರಹ ದಳಕ್ಕೆ ತನಿಖೆಗಾಗಿ ವಹಿಸುವ ಮುನ್ನ ತಮ್ಮ ಹಂತದಲ್ಲಿ ಆಂತರಿಕ ಪರಿಶೀಲನೆ (Internal Scrutiny) ಮಾಡಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಗಳ (Competent Authorities) ಅನುಮೋದನೆ ಪಡೆದ ನಂತರವೇ ಪ್ರಕರಣಗಳನ್ನು ಭ್ರಷ್ಟಾಚಾರ ನಿಗ್ರಹ ದಳಕ್ಕೆ ತನಿಖೆಗೆ ವಹಿಸತಕ್ಕದ್ದೆಂದು ತಿಳಿಸಲಾಗಿದೆ.

**(ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಸೂಚನೆ ಮೇರೆಗೆ)**

(ಪಲ್ಲವಿ ಆಕುರಾತಿ)
ಸರ್ಕಾರದ ಉಪ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಜಾಗೃತ ವಿಭಾಗ).

**ಗೆ:**

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ ವಿಭಾಗ, ಬೆಂಗಳೂರು–ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ 200 ಪ್ರತಿಗಳನ್ನು ಒದಗಿಸಲು **(ಮುಖ ಪತ್ರದೊಂದಿಗೆ)**.

**ಪ್ರತಿಗಳು:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
2. ಎಲ್ಲಾ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು.

3. ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ–1/2, ವಿಧಾನಸೌಧ, ಬೆಂಗಳೂರು.
4. ಎಲ್ಲಾ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
5. ಮಾನ್ಯ ರಾಜ್ಯಪಾಲರ ಅಪರ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
6. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಕರ್ನಾಟಕ ವಿಧಾನ ಪರಿಷತ್ತು, ಬೆಂಗಳೂರು.
7. ಎಲ್ಲಾ ಇಲಾಖಾ ಮುಖ್ಯಸ್ಥರು.
8. ಎಲ್ಲಾ ಪ್ರಾದೇಶಿಕ ಆಯುಕ್ತರು.
9. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
10. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11. ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
12. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಎಲ್ಲಾ ಸರ್ಕಾರದ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು/ಶಾಖಾಧಿಕಾರಿಗಳು.
15. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.